## ದಿನಾಂಕ: 04.12.2021 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಯತೀಶ್. ಎ.ಜೆ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 166 ಕರೀಸಂದ್ರ)
3. ಶ್ರೀ, ದಿನೇಶ್ – ಕಂದಾಯ ವಸೂಲಿಗಾರರು (ವಾರ್ಡ್ 166 ಕರೀಸಂದ್ರ)
4. ಶ್ರೀ. ರುದ್ರೇಶ್ – ಸಹಾಯಕ ಅಭಿಯಂತರರು (ಬೆಸ್ಕಾಂ)
5. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
6. ಶ್ರೀ. ಬಾಬು – ಕಿ.ಆ.ಪ (ಹೊರಗುತ್ತಿಗೆ ಆಧಾರದ ಮೇಲೆ) (ವಾರ್ಡ್ 166 ಕರೀಸಂದ್ರ)
7. ಶ್ರೀ ಸೈಯ್ಯದ್ – ಕಿ.ಅ., ಬೆಂಗಳೂರು ನೀರು & ಒಳಚರಂಡಿ ಮಂಡಳಿ
8. ಟ್ರಾಫಿಕ್ ಪೋಲೀಸ್ ಇಲಾಖೆ ಜಯನಗರ/ ಬನಶಂಕರಿ ಹಾಗೂ ಕಾನೂನು ಮತ್ತು ಸುವ್ಯವಸ್ಥೆಯ ಪೊಲೀಸ್ ಅಧಿಕಾರಿಗಳು.
9. 7ನೇ ಬ್ಲಾಕ್ ಜಯನಗರ ಮತ್ತು ಕಾವೇರಿನಗರ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

------

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

**ಘನತ್ಯಾಜ್ಯ ವಿಲೇವಾರಿ :**

1. ಹಿಂದಿನ ಸಭೆಗಳಲ್ಲಿ ಸಾರ್ವಜನಿಕರು ಪ್ರಸ್ತಾಪಿಸಿದಂತೆ ವಾರ್ಡ್‌ನ ಹುಣಸೇಮರ ಜಂಕ್ಷನ್‌ನಲ್ಲಿ ಘನತ್ಯಾಜ್ಯ ಸುರಿಯುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಘನತ್ಯಾಜ್ಯ ವಿಲೇವಾರಿ ವಿಭಾಗ ಹಾಗೂ ವಾರ್ಡ್ ವತಿಯಿಂದ ಕ್ರಮ ಕೈಗೊಳ್ಳಲಾಗಿದ್ದು ಸದರಿ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸುವುದು ಸೂಕ್ತವಾಗಿರುವ ಹಿನ್ನಲೆಯಲ್ಲಿ ಮುಂದಿನ ಆಯವ್ಯಯ ಸಮಯದಲ್ಲಿ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ವಿವರಿಸಲಾಯಿ ತು.
2. ವಾರ್ಡ್‌ನ ಇಂಡಸ್ಟ್ರಿಯಲ್ ಬ್ಲಾಕ್ ಮತ್ತು 26ನೇ ಅಡ್ಡರಸ್ತೆ, ಎಡಿಯೂರು ಬಸ್ ನಿಲ್ದಾಣದ ಹತ್ತಿರ ಭಾಗದ ಕೆಲವು ಸ್ಥಳಗಳಲ್ಲಿ ಘನತ್ಯಾಜ್ಯ ಸಂಗ್ರಹಣೆ ಹಾಗೂ ಬೆಸ್ಕಾಂ ಟ್ರಾನ್ಸ್‌ಫಾರಂ ಸುತ್ತಾಮುತ್ತಾ ಸ್ವಚ್ಛತೆ ಕಾಪಾಡಲು ಬೆಸ್ಕಾಂ ಅಧಿಕಾರಿಗಳಿಗೆ ಹಾಗೂ ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಸೂಚಿಸಲಾಯಿತು.

**ಕ್ರಮ: ಸ.ಕಾ.ನಿ.ಅ(ಘನತ್ಯಾಜ್ಯ ವಿಲೇವಾರಿ)ಉಪ–ವಿಭಾಗ ಮತ್ತು** ಬೆಸ್ಕಾಂ ಅಧಿಕಾರಿಗಳು

ಕಾಮಗಾರಿ :

2021-22ನೇ ಸಾಲಿನ ಅನುಮೋದಿತ ಆಯವ್ಯಯ ಸಂಕೇತ 05-220610 ರ ಲೆಕ್ಕ ಶೀರ್ಷಿಕೆ P-3726 Zonal Public works – POW works – 60% for Annual Maintenance and Re-asphalting of roads in Ward Jurisdiction-Escrow Account-{Works demanded by citizens} and P-1802 ರ ಅಡಿಯಲ್ಲಿ ವಾರ್ಷಿಕ ಕ್ರಿಯಾಯೋಜನೆ ಅಡಿಯಲ್ಲಿ ಕಾಮಗಾರಿ ಹಾಗೂ ನಿರ್ವಹಣೆ ಕಾಮಗಾರಿಗಳನ್ನು ಮೀಸಲಿರಿಸಲಾಗಿರುವ ಮೊತ್ತದಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ಸಹಾಯಕ ಅಭಿಯಂತರರು ವಿವರಿಸಿದಂತೆ ಸಮಿತಿಯು ಅನುಮೋದಿಸಲಾಯಿತು.

| SL. No | Name of work | Cost in Lakhs |
|---|---|---|
| 1 | Maintainance of footpaths, drains & Re-Asphalting of damaged roads in Ward No 166 Karisandra jurisdiction. | 20.00 |
| 2 | Filling up of Potholes in Ward No 166 Karisandra jurisdiction. | 20.00 |
| 3 | Annual maintenance of Borewells and Water supply pipe lines in Ward No 166 Karisandra jurisdiction. | 20.00 |
| | **Total Amount in Lakhs** | 60.00 |

ಕ್ರಮ : ಕಾ.ಪಾಅ(ಜಯನಗರ) ವಿಭಾಗ ಮತ್ತು ಸ.ಕಾ.ನಿ.ಅ(ಬನಶಂಕರಿ) ಉಪ-ವಿಭಾಗ

ವಾರ್ಡ್-166ರ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್-166ರ ವ್ಯಾಪ್ತಿಯ ಜಲಮಂಡಳಿ, ಕಾಮಗಾರಿ ಮತ್ತು ಕಂದಾಯ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಗಿ, ಶೀಘ್ರವಾಗಿ ಕ್ರಮಕೈಗೊಳ್ಳುವಂತೆ ಸೂಚಿಸಲಾಯಿತು.

ಕ್ರಮ: ಕಾ.ಪಾಅ(ಜಯನಗರ) ವಿಭಾಗ / ಸ.ಕಾ.ನಿ.ಅ(ಬನಶಂಕರಿ-ಜಲಮಂಡಳಿ) ಉಪ-ವಿಭಾಗ ಮತ್ತು ಸ.ಕಂ.ಅ(ಬನಶಂಕರಿ)ಉಪ-ವಿಭಾಗ

ಪಶುಸಂಗೋಪನೆ ಇಲಾಖೆ :

ವಾರ್ಡಿನಲ್ಲಿ ನಾಯಿಗಳ ಹಾವಳಿ ದೈನಂದಿನ ಪ್ರಮಾಣದಲ್ಲಿ ಬಹಳ ಹೆಚ್ಚಾಗಿದ್ದು, ಇದರಿಂದ ಸ್ಥಳೀಯ ನಾಗರೀಕರ ದಿನನಿತ್ಯ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುವ ಕಾರಣ ಸದರಿ ತೊಂದರೆಯ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಪಶುಸಂಗೋಪನೆ ರವರಿಗೆ ಶೀಘ್ರವಾಗಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಕ್ರಮ: ಜಂಟಿ ನಿರ್ದೇಶಕರು(ಪಶುಸಂಗೋಪನೆ)

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮಕೈಗೊಳ್ಳುವ ನಿರೀಕ್ಷೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ವಾರ್ಡ್ ಸಂಖ್ಯೆ 166

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 166